(ಇಂದು ದಿನಾಂಕ:09-04-2026 ರಂದು ಸಾಕ್ಷಿದಾರರನ್ನು ಕರೆಯಿಸಲಾಯಿತು, ಪ್ರಮಾಣ ವಚನ ಬೋಧಿಸಲಾಯಿತು)

**<u>ಮುಖ್ಯ ವಿಚಾರಣೆ: ಎದುರುದಾರರ ನಂ.3 ರವರ ಪರ ಶ್ರೀ ಎಸ್ ಎನ್ ಎಮ್ ವಕೀಲರಿಂದ :-</u>**

ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿದ್ದೇನೆ. ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ.

ನಾನು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಈಗ ನೋಡುತ್ತಿದ್ದೇನೆ. ಸಾಕ್ಷಿಯು ಕೆಳಕಂಡ ದಾಖಲಾತಿಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಈ ಕೆಳಕಂಡಂತೆ ನಿಶಾನೆಯಾಗಿ ಗುರುತಿಸಲಾಯಿತು.

| | |
|---|---|
| ನಿ.ಆರ್.1 | ಅಧಿಕಾರ ಪತ್ರ |
| ನಿ.ಆರ್.2 | ವಿಮಾ ಪಾಲಸಿ |
| ನಿ.ಆರ್.3 | ದಿಃ 03-03-2026 ರಂದು ಎದುರುದಾರ ನಂ.1 ಇವರಿಗೆ ನೀಡಿದ ನೋಟೀಸು |
| ನಿ.ಆರ್.4 | ದಿಃ 03-03-2026 ರಂದು ಎದುರುದಾರ ನಂ.2 ಇವರಿಗೆ ನೀಡಿದ ನೋಟೀಸು |
| ನಿ.ಆರ್.5 ರಿಂದ 7 | ಮೂರು ಅಂಚೆ ರಶೀದಿಗಳು |
| ನಿ.ಆರ್.8 ಮತ್ತು 9 | ಎರಡು ಅಂಚೆ ಸ್ವೀಕೃತಿಗಳು |
| ನಿ.ಆರ್.10 | ಒಂದು ಅಂಚೆ ಲಕೋಟೆ |

**<u>ಪಾಟೀ ಸವಾಲುಃ ಅರ್ಜಿದಾರ ಪರ ಶ್ರೀ ಜೆ ಆರ್ ವಕೀಲರಿಂದ</u>**

1. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಮೃತ ಸಿದ್ದಪ್ಪ ರಸ್ತೆ ಮೇಲೆ ಮಲಗಿಕೊಂಡಿದ್ದ ಎಂದು ಬರೆಸಿರುವುದು ಸುಳ್ಳು ಇರುತ್ತದೆ ಎಂದರೆ, ಸ್ಥಳ ನಕಾಶೆ ಪ್ರಕಾರ ಮೃತ ಸಿದ್ದಪ್ಪ ರಸ್ತೆ ಮೇಲೆ ಮಲಗಿಕೊಂಡಿದ್ದ ಎಂದು ಸಾಕ್ಷಿ ನುಡಿಯುತ್ತಾರೆ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಲಾರಿಗೆ ಸಂಬಂಧಪಟ್ಟ ಎಲ್ಲ ದಾಖಲೆಗಳು ಸರಿ ಇದ್ದರೂ ಕೂಡಾ ಪರಿಹಾರ ಕೊಡುವುದನ್ನು ತಪ್ಪಿಸಲು ದಾಖಲೆಗಳು ಸರಿಯಾಗಿ ಇಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪರಿಹಾರ ಕೊಡುವುದನ್ನು ತಪ್ಪಿಸಲು ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಮತ್ತು ನನ್ನ ತಕರಾರಿನಲ್ಲಿ ಸುಳ್ಳು ಅಂಶಗಳನ್ನು ಬರೆಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯನ್ನು ವಿಚಾರಿಸಿ ನಂತರ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ. ಸರಿ ಇದೆ,

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು,
ಸಿಂಧನೂರು